**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 36/2024**

**ಚಾ.ಸಾಃ 1, ಫ್ರಾ.ಸಾಃ 2**

| | |
|---|---|
| ಸಾಕ್ಷಿದಾರನ ಹೆಸರು | ಮಂಜುನಾಥ ಗೌಡ |
| ತಂದೆಯ ಹೆಸರು | ಕೃಷ್ಣ ಗೌಡ |
| ವಯಸ್ಸು | 38 ವರ್ಷಗಳು |
| ಉದ್ಯೋಗ | ತರಕಾರಿ ವ್ಯಾಪಾರ |
| ವಾಸ್ತವ್ಯ | ಹಳಗೇರಿ, ಮುಗ್ವಾ, ಹೊನ್ನಾವರ ತಾಲೂಕು |

**ಸಾಕ್ಷಿಯನ್ನು ದಿನಾಂಕಃ 21-08-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನಾನು ಈ ಮೊದಲು ನೋಡಿಲ್ಲ.

ನಾನು ಸುಮಾರು 6 ವರ್ಷಗಳಿಂದ ಮುಗ್ವಾ ಗ್ರಾಮದ ಸುಬ್ರಹ್ಮಣ್ಯ ದೇವಸ್ಥಾನದ ಹತ್ತಿರ ರಾಷ್ಟ್ರೀಯ ಹೆದ್ದಾರಿಯ ಪಕ್ಕದಲ್ಲಿ ತರಕಾರಿ ಅಂಗಡಿಯನ್ನು ಇಟ್ಟುಕೊಂಡು ವ್ಯಾಪಾರ ಮಾಡುತ್ತಿದ್ದೇನೆ.

ದಿನಾಂಕ 25-11-2023 ರಂದು ಮಧ್ಯಾಹ್ನ 03-30 ರ ಸಮಯಕ್ಕೆ ನಾನು ಅಂಗಡಿಯಲ್ಲಿದ್ದಾಗ ಕವಲಕ್ಕಿ ಕಡೆಯಿಂದ ಹೊನ್ನಾವರದ ಕಡೆಗೆ ಒಂದು ಕಾರು ಬರುತಿತ್ತು. ಹೊನ್ನಾವರದಿಂದ ಕವಲಕ್ಕಿ ಕಡೆಗೆ ಒಂದು ಬೈಕು ಹೋಗುತ್ತಿತ್ತು. ಇದ್ದಕ್ಕಿದ್ದ ಹಾಗೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಶಬ್ದ ಕೇಳಿತು. ತಕ್ಷಣ ನಾನು ನೋಡಿದಾಗ ಬೈಕು ಮತ್ತು ಕಾರು ಮುಖಾ ಮುಖಿ ಡಿಕ್ಕಿಯಾಗಿತ್ತು. ಬೈಕಿನಲ್ಲಿ ಎರಡು ಜನ ಇದ್ದು ಅವರು ಕೆಳಗೆ ಬಿದ್ದಿದ್ದರು ಮತ್ತು ಅವರಿಗೆ ಪೆಟ್ಟಗಿದ್ದು ಒಂದು ರಿಕ್ಷಾದಲ್ಲಿ ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಬಂದೆವು. ನಂತರ ಅವರ ಮನೆಯವರು ಅವರನ್ನು ಹೆಚ್ಚಿನ ಚಿಕಿತ್ಸೆಗೆ ಬೇರೆ ಕಡೆಗೆ ಕರೆದಕೊಂಡು ಹೋದರು.

ನಂತರ ನಾನು ಅಪಘಾತದ ಬಗ್ಗೆ ಪೋಲೀಸ್ ಠಾಣೆಗೆ ಹೋಗಿ ದೂರನ್ನು ನೀಡಿರುತ್ತೇನೆ. ದೂರನ್ನು ನೋಡುತ್ತಿದ್ದು ನಿಪಿ-1 ಎಂದು, ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಮರು ದಿನ ಪೋಲಿಸರು ಅಪಘಾತ ಸ್ಥಳಕ್ಕೆ ಬಂದು ಒಂದು ಪಂಚನಾಮೆ ಮತ್ತು ಕಚ್ಚಾ ನಕಾಶೆಯನ್ನು ತಯಾರಿಸಿ 7 ಫೋಟೋ ತೆಗೆಸಿರುತ್ತಾರೆ. ಅಪಘಾತ ಸ್ಥಳವನ್ನು ನಾನೇ ತೋರಿಸಿರುತ್ತೇನೆ. ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-2 ಎಂದು, ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು, ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ನಿಪಿ-3 ಎಂದು, ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು, 7 ಫೋಟೋಗಳನ್ನು ನಿಪಿ-4 ರಿಂದ 10 ಎಂದು ಗುರುತಿಸಲಾಯಿತು.

ನಂತರ ನನ್ನನ್ನು ಪೋಲೀಸ್ ಠಾಣೆಗೆ ಕರೆಸಿ ಅಪಘಾತಕ್ಕೊಳಗಾದ ಕಾರು ಮತ್ತು ಬೈಕಿನ ಹತ್ತಿರ ನನ್ನನ್ನು ನಿಲ್ಲಿಸಿ 6 ಫೋಟೋಗಳನ್ನು ತೆಗೆಸಿ, ಪಂಚನಾಮೆಗೆ ನನ್ನ ಸಹಿ ತೆಗೆದುಕೊಂಡಿರುತ್ತಾರೆ. ಸದರಿ

ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-11 ಎಂದು, ಸಾಕ್ಷಿ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. 6 ಫೋಟೋಗಳನ್ನು ನಿಪಿ-12 ರಿಂದ 17 ಎಂದು ಗುರುತಿಸಲಾಯಿತು.

ನಂತರ ಚಿಕಿತ್ಸೆ ಪಡೆಯುತ್ತಿದ್ದ ವ್ಯಕ್ತಿ ಮೃತಪಟ್ಟಿರುವುದಾಗಿ ಗೊತ್ತಾಯಿತು. ಈ ಬಗ್ಗೆ ಪುನಃ ಪೋಲೀಸ್ ಠಾಣೆಗೆ ಹೋಗಿ ಮರು ಹೇಳಿಕೆ ನೀಡಿರುತ್ತೇನೆ. ಅಪಘಾತವನ್ನು ನಾನು ಕಣ್ಣಾರೆ ನೋಡಿಲ್ಲ. ಯಾರ ತಪ್ಪಿನಿಂದ ಅಪಘಾತ ಆಯಿತು ಎಂದು ನನಗೆ ಗೊತ್ತಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 25-11-2023 ರಂದು ಸಂಜೆ 05-00 ರ ಸಮಯಕ್ಕೆ ನಾನು ಅಂಗಡಿಯಲ್ಲಿದ್ದಾಗ ಅಂಗಡಿ ಕಸ ಹಾಕಲು ರಾಷ್ಟ್ರೀಯ ಹೆದ್ದಾರಿಯ ಪಕ್ಕದಲ್ಲಿ ಹೋಗುತ್ತಿದ್ದಾಗ ರಾಘವೇಂದ್ರ ಸಂಸ್ಕೃತ ಪಾಠಶಾಲೆಯ ಎದುರಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಈಗ ನ್ಯಾಯಾಲಯದ ಮುಂದಿರುವ ಆರೋಪಿಯು ತನ್ನ ಕಾರನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ತನ್ನ ಮುಂದೆ ಹೋಗುತ್ತಿದ್ದ ಮೋಟಾರು ಸೈಕಲ್ಲನ್ನು ಓವರಟೇಕ್ ಮಾಡಲು ರಸ್ತೆಯಲ್ಲಿ ಬಲಬದಿಗೆ ಚಲಾಯಿಸಿದ್ದು ಆ ವೇಳೆಗೆ ಹೊನ್ನಾವರ ಕಡೆಯಿಂದ ಒಂದು ಬೈಕ್ ಬರುತ್ತಿದ್ದು ಆತನು ಸದರಿ ವಾಹನವನ್ನು ಓವರಟೇಕ್ ಮಾಡಿ ರಸ್ತೆಯ ಬಲಬದಿಯಲ್ಲಿ ಕಾರನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿ ಎದುರಿನಿಂದ ಬರುತ್ತಿದ್ದ ಬೈಕಿಗೆ ಡಿಕ್ಕಿಪಡಿಸಿರುತ್ತದೆ ಎಂದರೆ ಸರಿಯಲ್ಲ. ಸದರಿ ಅಪಘಾತದಿಂದ ಬೈಕನಲ್ಲಿದ್ದವರಿಗೆ ಗಾಯಗಳಾಗಿದ್ದು ಚಿಕಿತ್ಸೆಪಡೆಯುತ್ತಿದ್ದ ಬೈಕಿನ ಹಿಂಬದಿ ಸವಾರ ಮೃತಪಟ್ಟಿದ್ದು ಸದರಿ ಅಪಘಾತಕ್ಕೆ ಆರೋಪಿಯ ಅತಿವೇಗ ಮತ್ತು ಅಜಾಗರೂಕತೆಯೇ ಕಾರಣ ಎಂದರೆ ಸರಿಯಲ್ಲ. ಅದೇ ರೀತಿ ನಿಪಿ-1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತವನ್ನು ಕಣ್ಣಾರೆ ನೋಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಂ. ಎನ್. ಸುಬ್ರಹ್ಮಣ್ಯರಿಂದಃ**

ನಾನು ಅಪಘಾತ ಸ್ಥಳಕ್ಕೆ ಹೋಗುವ ಮೊದಲೇ ಜನ ಸೇರಿದ್ದರು. ದೂರನ್ನು ನಾನೇ ಬರೆದಿರುತ್ತೇನೆ. ಪೋಲೀಸರು ಹೇಳಿದಂತೆ ಬರೆದುಕೊಟ್ಟಿರುತ್ತೇನೆ. ಪಂಚನಾಮೆಯನ್ನು ಬರೆಯಲು ನಾನು ಮಾಹಿತಿ ನೀಡಿರುವುದಿಲ್ಲ. ಪೋಲೀಸ್ ಠಾಣೆಯಲ್ಲಿ ಪಂಚನಾಮೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ. **Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**